## 103. ಕಲ್ಯಾಣ ಕರ್ನಾಟಕ ಅಭಿವೃದ್ಧಿಗೆ ಹೊಸ ಆಯಾಮ: ಸಿಎಂ

ಕಲ್ಯಾಣ ಕರ್ನಾಟಕದ ಅಭಿವೃದ್ಧಿಗೆ ಹೊಸ ಆಯಾಮ ನೀಡುವುದು ನಮ್ಮ ಸರ್ಕಾರದ ಗುರಿ ಎಂದು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಹೇಳಿದ್ದಾರೆ.

ಕಲ್ಯಾಣ ಕರ್ನಾಟಕ ಮಾನವ ಸಂಪನ್ಮೂಲ, ಕೃಷಿ ಮತ್ತು ಸಾಂಸ್ಕೃತಿಕ ಸಂಘದ ಉದ್ಘಾಟನೆಯನ್ನು ವಿಡಿಯೋ ಕಾನ್ಫರೆನ್ಸ್ ಮೂಲಕ ನೆರವೇರಿಸಿ ಮಾತನಾಡಿ, 2020 ಫೆಬ್ರವರಿಯಲ್ಲಿ ಹೈದ್ರಾಬಾದ್–ಕರ್ನಾಟಕ ಭಾಗವನ್ನು ಕಲ್ಯಾಣ ಕರ್ನಾಟಕ ಎಂದು ನಮ್ಮ ಸರ್ಕಾರ ಘೋಷಿಸಿತು. ಕೇವಲ ಹೆಸರಿನಿಂದ ಕಲ್ಯಾಣ ಕರ್ನಾಟಕ ಎಂದು ಕರೆದರೆ ಸಾಲದು, ಈ ಪ್ರದೇಶದ 6 ಜಿಲ್ಲೆಗಳ ನಿಜವಾದ ಅಭಿವೃದ್ಧಿ ಸಾಧಿಸುವ ಮೂಲಕ ಕಲ್ಯಾಣದ ಪರಿಕಲ್ಪನೆ ನಿಜವಾದ ಅರ್ಥದಲ್ಲಿ ಸಾಕಾರಗೊಳ್ಳಬೇಕು ಎಂಬುದು ಸರ್ಕಾರದ ಆಶಯ ಎಂದರು.

ಕೃಷಿ, ಆರೋಗ್ಯ, ಶಿಕ್ಷಣ, ಸ್ವಯಂ ಉದ್ಯೋಗ, ಗ್ರಾಮ ಸಬಲೀಕರಣ ಮತ್ತು ನೈತಿಕ ತತ್ವಗಳನ್ನು ಸಾಧಿಸಿ, ಕಲ್ಯಾಣ ಕರ್ನಾಟಕ ಜನರ ಬದುಕಿನಲ್ಲಿ ಹೊಸ ಶಕೆಯೊಂದು ಪ್ರಾರಂಭವಾಗಲಿದೆ. ಕಲ್ಯಾಣ ಕರ್ನಾಟಕ ಭಾಗದ ನಾಯಕರಾದ ಮಾಜಿ ಸಂಸದ ಡಾ.ಬಸವರಾಜ ಪಾಟೀಲ ಸೇಡಂ ಕ್ರಾಂತಿಕಾರಕ ಬದಲಾವಣೆಗೆ ಮುನ್ನುಡಿ ಬರೆಯಲು ಸಮರ್ಥರಿದ್ದಾರೆ. ಯಾವುದೇ ಅಭಿವೃದ್ಧಿ ಜನಕೇಂದ್ರಿತವಾಗಿರಬೇಕು ಮತ್ತು ಸ್ಥಳೀಯ ಸಂಪನ್ಮೂಲ ಮತ್ತು ಸ್ಥಳೀಯ ಕೌಶಲವನ್ನು ಆಧರಿಸಿ ಉತ್ಪಾದನೆ ಮತ್ತು ಸೇವೆಯನ್ನು ಒದಗಿಸಿಕೊಳ್ಳಬೇಕು ಎಂದು ಹೇಳಿದರು. ಡಾ.ಬಸವರಾಜ ಪಾಟೀಲ ಸೇಡಂ ಅವರ ಅಧ್ಯಕ್ಷತೆಯಲ್ಲಿ 15 ಜನರ ಆಡಳಿತ ಮಂಡಳಿ ಸದಸ್ಯರ ಸಮಿತಿ ಕಲ್ಯಾಣ ಕರ್ನಾಟಕ ವಿಭಾಗದ ಎಲ್ಲ ಜಿಲ್ಲೆಗಳ ಸರ್ವತೋಮುಖ ಅಭಿವೃದ್ಧಿಗೆ ಶ್ರಮಿಸಲಿದೆ ಎಂದು ತಿಳಿಸಿದರು.

ಆಧಾರ:ಉದಯವಾಣಿ, ದಿನಾಂಕ:10.06.2020